# ಕರ್ನಾಟಕ ಸರ್ಕಾರ

ನಂ.ಗ್ರಾಅಪ/04/ಗ್ರಾಪಂಕಾ/2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 25-02-2016

## ಸುತ್ತೋಲೆ

ವಿಷಯ: ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಯ ಡಿಜಿಟಲ್ ಸಹಿಯ ಮೂಲಕ ವಿತರಿಸುವ ಬಗ್ಗೆ.

ಉಲ್ಲೇಖ:

5. ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 83 ಗ್ರಾಪಂಅ 2013, ದಿನಾಂಕ:14-06-2013.
6. ಸರ್ಕಾರದ ಸೇರ್ಪಡೆ ಅಧಿಸೂಚನೆ ಸಂಖ್ಯೆ:ಗ್ರಾಅಪ 83 ಗ್ರಾಪಂಅ 2013, ದಿನಾಂಕ:15-06-2013.
7. ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 83 ಗ್ರಾಪಂಅ 2013,(ಭಾಗ-6) ದಿನಾಂಕ:21-01-2014.
8. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 83 ಗ್ರಾಪಂಅ 2013,(ಭಾಗ-6) ದಿನಾಂಕ:03-02-2014.

---

ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ಕ್ಕೆ ಸಂಬಂಧಿಸಿದಂತೆ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) (ತಿದ್ದುಪಡಿ) ನಿಯಮಗಳು, 2013 ರಲ್ಲಿ ನಿಯಮ 28 ಮತ್ತು 30 ಕ್ಕೆ ದಿನಾಂಕ:14-06-2013 ಮತ್ತು ದಿನಾಂಕ:15-06-2013 ರಲ್ಲಿ ತಿದ್ದುಪಡಿ ತರಲಾಗಿದ್ದು, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಈ ಕೆಳಕಂಡ ಕ್ರಮಬದ್ಧ ಆಸ್ತಿಗಳಿಗೆ ನಿಗಧಿತ ನಮೂನೆ 9 ಹಾಗೂ 11 ಎ ರಲ್ಲಿ ದಾಖಲಿಸಲು ದಿನಾಂಕ:15-06-2013 ರಿಂದ ರಾಜ್ಯದ ಗ್ರಾಮ ಪಂಚಾಯತಿಗಳು ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9 ಮತ್ತು 11 ಗಳನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಯ ಡಿಜಿಟಲ್ ಸಹಿಯ ಮೂಲಕ ವಿತರಿಸುತ್ತಿವೆ. ತದ ನಂತರ ಹೊರಡಿಸಿದ ಸುತ್ತೋಲೆಗಳನ್ನಾಧರಿಸಿ ಈ ಕೆಳಕಂಡ ವರ್ಗದ ಆಸ್ತಿಗಳಿಗೆ ನಮೂನೆ-9 ಮತ್ತು ನಮೂನೆ 11ಎ ನೀಡಲಾಗುತ್ತಿದೆ.

1. ಗ್ರಾಮ ಠಾಣಾ ಒಳಗಡೆ ಇರುವ ಆಸ್ತಿಗಳು- ತಹಶೀಲ್ದಾರರಿಂದ ಗ್ರಾಮ ಠಾಣಾದ ಕಚ್ಚಾ ನಕಾಶೆಯನ್ನು ಒದಗಿಸುವುದು.
2. ಗ್ರಾಮ ಠಾಣಾದ ಹೊರಗಡೆ ಇರುವ ಆಸ್ತಿಗಳು- ಸಕ್ಷಮ ಪ್ರಾಧಿಕಾರದಿಂದ ಕೃಷಿಯೇತರ ಉದ್ದೇಶಕ್ಕಾಗಿ ಹೊರಡಿಸಿರುವ ಆದೇಶದ ಪ್ರತಿ ಹಾಗೂ ನಗರಾಭಿವೃದ್ಧಿ ಇಲಾಖೆಯ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಗೊಂಡಿರುವ ಲೇಔಟ್ ಪ್ಲಾನ್.
3. ಸರ್ಕಾರದ ವಸತಿ ಯೋಜನೆಗಳಾದ ಬಸವ ವಸತಿ, ಗ್ರಾಮೀಣ ಅಂಬೇಡ್ಕರ್ ಹಾಗೂ ಇಂದಿರಾ ಆವಸ್ ಯೋಜನೆಯಡಿ ಸೃಜಿಸಿರುವ ಆಸ್ತಿಗಳು.
4. ಸಿಂಗಲ್ ಸೈಟ್ ಲೇಔಟ್ ಪ್ಲಾನ್ ಅಪ್ರೂವಲ್.
5. ಕೈಗಾರಿಕಾ ಉದ್ದೇಶಕ್ಕೆ ಪರಿವರ್ತಿಸಿದ ಜಮೀನು
6. ಅಪಾರ್ಟ್‌ಮೆಂಟ್ ಯುನಿಟ್ (ಭೂ ಪರಿವರ್ತನೆ ಮತ್ತು ಲೇಔಟ್ ಅನುಮೋದನೆಯಾಗಿರುವುದು.)
7. ದಿನಾಂಕ:16-11-1992 ಪೂರ್ವದಲ್ಲಿ ಪಂಚಾಯತಿಗಳಿಂದ ಬಡಾವಣೆ ಎಂದು ಅನುಮೋದನೆಯಾಗಿರುವ ಆಸ್ತಿಗಳು.
8. ನಗರಾಭಿವೃದ್ಧಿ ಇಲಾಖೆಯ ಸಕ್ಷಮ ಪ್ರಾಧಿಕಾರ / ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಅನುಮೋದಿತ ವಾಣಿಜ್ಯ ನಿವೇಶನ
9. ದಿನಾಂಕ:11-11-2014 ರ ನಂತರ ಗ್ರಾಮ ಪಂಚಾಯತಿಗಳಿಂದ / ತಾಲ್ಲೂಕು ಪಂಚಾಯತಿಗಳಿಂದ ಅನುಮೋದನೆಯಾಗಿರುವ ಬಡಾವಣೆ ನಿವೇಶನ.
10. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ BDA, BMRDA, BIAAPA, KHB, KIADB, LDA's & LPA's ಅನುಮೋದಿಸಿದ ಬಡಾವಣೆಗಳಲ್ಲಿ ಬರುವ ಆಸ್ತಿಗಳು.

ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ಕ್ಕೆ ಸಂಬಂಧಿಸಿದಂತೆ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು)

(ಎರಡನೇ ತಿದ್ದುಪಡಿ) ನಿಯಮಗಳು, 2013 ರ ನಿಯಮ 30 ಕ್ಕೆ ದಿನಾಂಕ:21-01-2014 ರಂದು ತಿದ್ದುಪಡಿ ತರಲಾಗಿದ್ದು, ಈ ಕೆಳಕಂಡಂತಿದೆ.

"ಸರ್ಕಾರಿ ಜಮೀನಿನಲ್ಲಿ, ಸ್ಥಳೀಯ ಸಂಸ್ಥೆಗಳ ಸ್ವತ್ತಿನಲ್ಲಿ, ಸರ್ಕಾರಿ ಸ್ವಾಮ್ಯದ ಶಾಸನಬದ್ಧ ನಿಕಾಯ ಅಥವಾ ಸಂಸ್ಥೆಗಳ ಸ್ವತ್ತಿನಲ್ಲಿ ಹೊರತುಪಡಿಸಿ, ಇನ್ನುಳಿದ ಖಾಲಿ ಜಮೀನುಗಳು, ಕಟ್ಟಡಗಳು, ಕಟ್ಟಡಗಳ ಮತ್ತು ಸ್ಥಳವನ್ನು ಒಳಗೊಂಡಂತೆ ಕಟ್ಟಡ ನಿಯಮಗಳನ್ನು ಉಲ್ಲಂಘಿಸಿ, ನಿರ್ಮಿತವಾಗಿರುವ ಕಟ್ಟಡಗಳಿಗೆ ಅಥವಾ ಅನಧಿಕೃತ ಬಡಾವಣೆಗಳ ಅಥವಾ ಕಂದಾಯ ಜಮೀನುಗಳ ಅಥವಾ ಕಟ್ಟಡಗಳು ಪೂರ್ಣಗೊಂಡಿರುವ ಬಗ್ಗೆ ದಾಖಲೆಗಳಿಲ್ಲದೆ ಅನುಭವಿಸುತ್ತಿರುವ ಕಟ್ಟಡಗಳು". ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧವಲ್ಲದ ಆಸ್ತಿಗಳಿಗೆ ನಿಗಧಿತ ನಮೂನೆ 11ಬಿ ರಲ್ಲಿ ದಾಖಲಿಸಲು ದಿನಾಂಕ:03-02-2014 ರಿಂದ ರಾಜ್ಯದ ಗ್ರಾಮ ಪಂಚಾಯತಿಗಳು ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-11ಬಿ ಯನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಯ ಡಿಜಿಟಲ್ ಸಹಿಯ ಮೂಲಕ ವಿತರಿಸುತ್ತಿವೆ.

ನಮೂನೆ 11ಬಿ ಪಡೆಯಲು ಸಾರ್ವಜನಿಕರು 1) ಲಭ್ಯವಿದ್ದರೆ ಪರಿವರ್ತಿತ ಆದೇಶದ ಪ್ರತಿ 2) ಪಹಣಿ ಪತ್ರಿಕೆ, 3) ಫಾರಂ ಬಿಲ್ಡಿಂಗ್‌ಗಳನ್ನು ಗುರುತಿಸಲು ಸಂಬಂಧಿಸಿದ ತಹಶೀಲ್ದಾರ್ / ಕಂದಾಯ ಪರೀವೀಕ್ಷಕರ ಪ್ರಮಾಣ ಪತ್ರ 4) ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಪ್ರಕರಣ 95(2) ರನ್ವಯ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಆಸ್ತಿಗಳಿಗೆ ಸಂಬಂಧಿಸಿದಂತೆ ತಹಶೀಲ್ದಾರ್‌ರವರು ನೀಡಿರುವ ಹಿಂಬರಹದ ಪ್ರತಿಯೊಂದಿಗೆ ಯಾವುದಾದರೂ ಒಂದು ದಾಖಲೆಯನ್ನು ನೀಡಬೇಕಾಗುತ್ತದೆ.

ಸರ್ಕಾರವು ಆಗಿಂದ್ದಾಗೆ ಹೊರಡಿಸುವ ನಿಯಮಗಳು, ಸುತ್ತೋಲೆಗಳು, ಪತ್ರಗಳಲ್ಲಿನ ನಿರ್ದೇಶನಗಳ ಅನುಸಾರ ಗ್ರಾಮ ಪಂಚಾಯತಿಗಳು ಇ-ಸ್ವತ್ತು ತಂತ್ರಾಂಶದ ಮೂಲಕ ಆಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆ-9, 11ಎ ಮತ್ತು 11ಬಿ ಗಳನ್ನು ವಿತರಿಸಲು ಕ್ರಮ ಕೈಗೊಳ್ಳತಕ್ಕದ್ದು. ಇ-ಸ್ವತ್ತು ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಆದೇಶಗಳು, ಸುತ್ತೋಲೆಗಳು ಮತ್ತು ಪತ್ರಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ವೆಬ್‌ಸೈಟ್ ವಿಳಾಸ:rdpr.kar.nic.in ನಲ್ಲಿ ಅಳವಡಿಸಲಾಗುತ್ತಿದೆ.

ಆದ್ದರಿಂದ ಗ್ರಾಮ ಪಂಚಾಯತಿಗಳು ತಪ್ಪದೆ ತೆರಿಗೆ ನಿರ್ಧರಣೆ ಪಟ್ಟಿ ರಿಜಿಸ್ಟರ್ (ನಮೂನೆ-9, 11ಬಿ) ಭೂಮಿ ಮತ್ತು ಕಟ್ಟಡದ ತೆರಿಗೆಗಳ ಬೇಡಿಕೆ ಮತ್ತು ವಸೂಲಿ ರಿಜಿಸ್ಟರ್ (ನಮೂನೆ-11ಎ) ಗಳನ್ನು ಕಡ್ಡಾಯವಾಗಿ ನಿರ್ವಹಿಸುವಂತೆ ಸೂಚಿಸಿದೆ. ಸದರಿ ನಮೂನೆಗಳನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಡಿಜಿಟಲ್ ಸಹಿಯ ಮೂಲಕ ಮಾತ್ರ ವಿತರಿಸತಕ್ಕದ್ದು.

ಮೇಲ್ಕಂಡ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳಿಗೆ ಮತ್ತೊಮ್ಮೆ ತಿಳಿಸಿದೆ.

(ಕೆ. ಯಾಲಕ್ಕಿಗೌಡ) 25/2/16
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
3. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.